**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ. ರವರು ನಿಯಮ 72 ರಡಿ ಪ್ರಸ್ತಾಪಿಸಿರುವ ವಿಷಯಕ್ಕೆ ಉತ್ತರ.**

**ಪ್ರಶ್ನೆ:** ಹವಾಮಾನ ಆಧಾರಿತ ಬೆಳೆವಿಮೆ ಯೋಜನೆಗೆ ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳ ಅಡಿಕೆ ಮತ್ತು ಕರಿ ಮೆಣಸು ಬೆಳೆಗಳಿಗೆ 2024-25 ನೇ ಸಾಲಿಗೆ ಹವಾಮಾನ ಆಧಾರಿತ ಬೆಳೆ ವಿಮೆ ಯೋಜನೆಗೆ ಪ್ರೀಮಿಯಂ ಮೊತ್ತ ಪಾವತಿಸಿ ನೋಂದಾವಣಿ ಮಾಡಲು ಜುಲೈ ತಿಂಗಳ ಅಂತ್ಯದವರೆಗೆ ಅವಕಾಶ ಕಲ್ಪಿಸಲಾಗಿದೆ. ಆದರೆ ಬೆಳೆ ಸಮೀಕ್ಷೆ ತಂತ್ರಾಂಶದಲ್ಲಿ 2023-24 ನೇ ಸಾಲಿನಲ್ಲಿ ಬೆಳೆ ಸಮೀಕ್ಷೆ ಮಾಡದ ರೈತರ ಜಮೀನಿನ ವಿವರ ತೋರಿಸದೇ ಇರುವುದರಿಂದ ಕಳೆದ ಬಾರಿ ಬೆಳೆ ಸಮೀಕ್ಷೆ ಮಾಡದ ಹಲವಾರು ಮಂದಿ ಅಡಿಕೆ, ಕರಿಮೆಣಸು ಬೆಳೆಯುವ ರೈತರು ಈ ಯೋಜನೆಯಿಂದ ವಂಚಿತರಾಗಿದ್ದಾರೆ. ಎಷ್ಟೋ ಮಂದಿ ರೈತರ ಮನೆಯಲ್ಲಿ ಸ್ಮಾರ್ಟ್ ಫೋನ್ ಇರುವುದಿಲ್ಲ. ಕೆಲವೊಂದು ಕಡೆಗಳಲ್ಲಿ ನೆಟ್ ವರ್ಕ್ ಸಮಸ್ಯೆ ಇದೆ, ಇನ್ನೂ ಕೆಲವು ರೈತರಿಗೆ ಸ್ಮಾರ್ಟ್ ಫೋನ್ ಇದ್ದರೂ ಬೆಳೆ ಸಮೀಕ್ಷೆ ಮಾಡಲು ತಿಳಿಯದ ಕಾರಣದಿಂದಾಗಿ ಹಲವಾರು ರೈತರು ಬೆಳೆ ಸಮೀಕ್ಷೆ ಮಾಡಲು ಸಾಧ್ಯವಾಗಿರುವುದಿಲ್ಲ.

ಈ ಹಿನ್ನೆಲೆಯಲ್ಲಿ 2024-25 ನೇ ಸಾಲಿನ ಹವಾಮಾನ ಆಧಾರಿತ ಬೆಳೆವಿಮೆ ಯೋಜನೆಯ ಪ್ರಯೋಜನವನ್ನು ಎಲ್ಲಾ ಅಡಿಕೆ ಬೆಳೆಯುವ ರೈತರು ಪಡೆಯುವಂತಾಗಲೂ ಬೆಳೆ ಸಮೀಕ್ಷೆ ಮಾಡದಿರುವ ರೈತರ ಜಮೀನಿಗೆ ಸಹ ಅವಕಾಶ ಕಲ್ಪಿಸಿ ಇಲಾಖಾ ವತಿಯಿಂದಲೇ ಈ ವರ್ಷ ತಕ್ಷಣವೇ ಬೆಳೆ ಸಮೀಕ್ಷೆ ಪ್ರಾರಂಭ ಮಾಡಿಸಿ, ರೈತರಿಗೆ ಯೋಜನೆಯ ಲಾಭ ಪಡೆಯಲು ಇದುವರೆಗೂ ಯಾವುದೇ ಕ್ರಮ ಕೈಗೊಳ್ಳದೇ ಇರುವುದರಿಂದ, ರೈತರು ಅತ್ಯಂತ ಸಂಕಷ್ಟಕ್ಕೆ ಸಿಲುಕಿರುವ ಗಂಭೀರ ಪರಿಸ್ಥಿತಿ ಕುರಿತು ಮಾನ್ಯ ಗಣಿ ಮತ್ತು 'ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರ ಗಮನವನ್ನು ಸೆಳೆಯಲು ಬಯಸುತ್ತೇನೆ.

**ಉತ್ತರ:**

ಬೆಳೆ ವಿಮೆ ನೋಂದಣಿ ಸಮಯದಲ್ಲಿ ಬೆಳೆ ಸಮೀಕ್ಷೆ ಪ್ರಕಾರ ರೈತರ ಮಾಹಿತಿಯನ್ನು ಪರಿಶೀಲಿಸಲಾಗುತ್ತಿದ್ದು, ಇದಕ್ಕಾಗಿ ಪ್ರಸ್ತುತ ವರ್ಷದಲ್ಲಿ (2024-25) ಬಹು ವಾರ್ಷಿಕ ಬೆಳೆಗಳನ್ನು ಬೆಳೆ ವಿಮೆಯಡಿ ನೋಂದಣಿ ಮಾಡುವಾಗ ಮುಂಗಾರು 2022 ಮತ್ತು ಮುಂಗಾರು 2023ರ ಬೆಳೆ ಸಮೀಕ್ಷೆ ದತ್ತಾಂಶವನ್ನು ಪರಿಗಣಿಸಲಾಗುತ್ತದೆ. ಈ ಎರಡೂ ವರ್ಷಗಳಲ್ಲಿ ಯಾವುದಾದರೂ ಒಂದು ವರ್ಷದಲ್ಲಿ ಬೆಳೆ ಬೆಳೆದಿದ್ದರೂ ಸಹ ಬೆಳೆ ವಿಮೆ ಮಾಡಿಸಬಹುದಾಗಿರುತ್ತದೆ.

ಬೆಳೆದ ಬೆಳೆಯ ಪ್ರಾಮಾಣಿಕತೆ /ನಿಖರತೆ ಬಗ್ಗೆ ದೃಢಪಡಿಸಿಕೊಳ್ಳುವ ಉದ್ದೇಶದಿಂದ ರೈತರಿಗೆ ರೈತರ ಆಪ್ ಮೂಲಕ ಬೆಳೆ ಸಮೀಕ್ಷೆ ಮಾಡಿ ತಮ್ಮ ಜಮೀನನ ವಿವರಗಳನ್ನು

ದಾಖಲಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಒಂದು ವೇಳೆ ನಾನಾ ಕಾರಣಗಳಿಂದ (ನೆಟ್ ವರ್ಕ್ ಸಮಸ್ಯೆ, ಆಂಡ್ರಾಯಿಡ್ ಫೋನ್ ಬಳಕೆ ಬಗ್ಗೆ ಮಾಹಿತಿ ಇಲ್ಲದಿರುವುದು) ರೈತರು ತಮ್ಮ ಜಮೀನಿನ ವಿವರಗಳನ್ನು ದಾಖಲಿಸಲು ಸಾಧ್ಯವಾಗದಿದ್ದಲ್ಲಿ ಸರ್ಕಾರವು ಖಾಸಗಿ ನಿವಾಸಿಗಳ (Private Residents) ಮುಖೇನ ಬೆಳೆ ಸಮೀಕ್ಷೆ ನಡೆಸಿ ರೈತರ ತಾಕುಗಳ ವಿವರಗಳನ್ನು ದಾಖಲಿಸಲು ಅವಕಾಶ ಕಲ್ಪಿಸಿರುತ್ತದೆ. ಬೆಳೆ ಸಮೀಕ್ಷೆ ದಾಖಲಾದ ವಿವರಗಳನ್ನು ನೋಡಲು ಬೆಳೆ ದರ್ಶಕ್ ಆಪ್ ನಲ್ಲಿ ಅವಕಾಶ ಕಲ್ಪಿಸಲಾಗಿದ್ದು ರೈತರು ಖುದ್ದಾಗಿ ನೋಡಬಹುದು ಅಥವಾ ರೈತ ಸಂಪರ್ಕ ಕೇಂದ್ರಗಳಲ್ಲಿ ನೋಡಬಹುದು.

2022-23ನೇ ಸಾಲಿನಲ್ಲಿ ಉಡುಪಿ ಜಿಲ್ಲೆಯಲ್ಲಿ ಶೇ. 99ಕ್ಕಿಂತ ಹೆಚ್ಚು ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಶೇ.98ಕ್ಕಿಂತ ಹೆಚ್ಚು ಹಾಗೂ 2023-24ನೇ ಸಾಲಿನಲ್ಲಿ ಉಡುಪಿ ಜಿಲ್ಲೆಯಲ್ಲಿ ಶೇ. 90 ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಶೇ.95 ರಷ್ಟು ಬೆಳೆ ಸಮೀಕ್ಷೆ ನಡೆಸಿದ್ದು, ಅದರಂತೆ ರೈತರು ಬೆಳೆ ಬೆಳೆದಿರುವ ವಿವರಗಳನ್ನೊಳಗೊಂಡ ದತ್ತಾಂಶ ಲಭ್ಯವಿದ್ದು ಇದರ ಆಧಾರದ ಮೇರೆಗೆ ನೋಂದಣಿ ಮಾಡಲಾಗುತ್ತಿರುವುದರಿಂದ 2024-25ನೇ ಸಾಲಿನಲ್ಲಿ ಸಮೀಕ್ಷೆ ನಡೆಸಿ ನೋಂದಣಿಗೆ ಅವಕಾಶ ಮಾಡುವ ಅವಶ್ಯಕತೆ ಕಂಡುಬಂದಿರುವುದಿಲ್ಲ. 2023-24ನೇ ಸಾಲಿನಲ್ಲಿ ದಕ್ಷಿಣ ಕನ್ನಡ (2,28,621)ಮತ್ತು ಉಡುಪಿ ಜಿಲ್ಲೆಗಳಲ್ಲಿ (10,377) ಅಧಿಸೂಚಿತ ಬೆಳೆಗಳಾದ ಅಡಿಕೆ ಕರಿಮೆಣಸು ಬೆಳೆಗಳಿಗೆ ಒಟ್ಟು 2,38,998 ಸಂಖ್ಯೆಯಷ್ಟು ರೈತ ಪ್ರಕರಣಗಳನ್ನು ನೋಂದಾಯಿಸಲಾಗಿರುತ್ತದೆ. ಅದೇ ರೀತಿ 2024-25ನೇ ಸಾಲಿನಲ್ಲಿ ದಕ್ಷಿಣ ಕನ್ನಡ (3,32,752) ಮತ್ತು ಉಡುಪಿ ಜಿಲ್ಲೆಗಳಲ್ಲಿ (21,371) ಅಧಿಸೂಚಿತ ಬೆಳೆಗಳಾದ ಅಡಿಕೆ ಕರಿಮೆಣಸು ಬೆಳೆಗಳಿಗೆ ಒಟ್ಟು 3,54,123 ಸಂಖ್ಯೆಯಷ್ಟು ರೈತ ಪ್ರಕರಣಗಳು ನೋಂದಾಯಿಸಲಾಗಿರುತ್ತದೆ.

HORTI 398 HGM 2024(E)

**(ಎಸ್. ಎಸ್. ಮಲ್ಲಿಕಾರ್ಜುನ್)**
ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಸಚಿವರು